# <u>ಕರ್ನಾಟಕ ವಿಧಾನ ಪರಿಷತ್ತು</u>

ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ. ಎಸ್. ಎಲ್ . ಬೋಜೇಗೌಡ (ಶಿಕ್ಷಕರ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1276
ಉತ್ತರಿಸಬೇಕಾದ ದಿನಾಂಕ : 29.12.2022

<table>
<tr><th>ಕ್ರ ಸಂ</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ)</td><td>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ರಾಜ್ಯದ ಗ್ರಾಮೀಣ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ 2019 ರಿಂದ 2022 ರವರೆಗೆ ಎಷ್ಟು ಅನುದಾನವನ್ನು ಮಂಜೂರು ಮಾಡಿದೆ ?</td><td>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ರಾಜ್ಯದ ಗ್ರಾಮೀಣ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರದ ಪರಿಷ್ಕೃತ ಆಯವ್ಯಯದನ್ವಯ ಹಾಗೂ 2022-23ನೇ ಸಾಲಿನ ಆಯವ್ಯಯದಲ್ಲಿ ಅನುದಾನವನ್ನು ಈ ಕೆಳಕಂಡಂತೆ ಮಂಜೂರು ಮಾಡಲಾಗಿರುತ್ತದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಬಿಡುಗಡೆಯಾದ ಅನುದಾನ<br>(ರೂ.ಕೋಟಿಗಳಲ್ಲಿ)</th></tr>
<tr><td>1</td><td>2019-20</td><td>15013.26</td></tr>
<tr><td>2</td><td>2020-21</td><td>15955.14</td></tr>
<tr><td>3</td><td>2021-22</td><td>18418.41</td></tr>
<tr><td>4</td><td>2022-23</td><td>17243.08</td></tr>
<tr><td colspan="2">ಒಟ್ಟು</td><td>66629.89 ಕೋಟಿಗಳು</td></tr>
</table>
</td></tr>
<tr><td>ಆ)</td><td>ಈ ಸಾಲಿನಲ್ಲಿ ಸರ್ಕಾರ ಮಂಜೂರು ಮಾಡಿರುವ ಅನುದಾನದಿಂದ ಗ್ರಾಮೀಣ ಭಾಗದ ಹಳ್ಳಿಗಳಿಗೆ ಪೂರ್ಣ ಪ್ರಮಾಣದಲ್ಲಿ ಕುಡಿಯುವ ನೀರಿನ ಸೌಲಭ್ಯ ಹಾಗೂ ರಸ್ತೆ ಚರಂಡಿಗಳನ್ನು ಅಭಿವೃದ್ಧಿ ಮಾಡಲು ಅನುದಾನದ ಕೊರತೆಯಿರುವುದರಿಂದ ಸರ್ಕಾರ ಗ್ರಾಮೀಣಾಭಿವೃದ್ಧಿ ಇಲಾಖೆಗೆ ಇನ್ನು ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ?</td><td>ಸರ್ಕಾರ ಮಂಜೂರು ಮಾಡಿರುವ ಅನುದಾನದಿಂದ ಗ್ರಾಮೀಣ ಭಾಗದ ಹಳ್ಳಿಗಳ ಕುಡಿಯುವ ನೀರಿಗೆ ಸಂಬಂಧಪಟ್ಟಂತೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ 'ಜಲ ಜೀವನ್ ಮಿಷನ್' ಯೋಜನೆಯನ್ನು ರಾಜ್ಯದಲ್ಲಿ ಈಗಾಗಲೇ ಎಲ್ಲಾ ಗ್ರಾಮೀಣ ಜನವಸತಿಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.<br><br>2022-23 ನೇ ಸಾಲಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ, ಗ್ರಾಮೀಣ ಪ್ರದೇಶದ ಜನ ವಸತಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಮೂಲ ಆಯವ್ಯಯ ಒಟ್ಟು ರೂ.5478.39 ಕೋಟಿಗಳನ್ನು ಒದಗಿಸಲಾಗಿದೆ. ಹಾಗೂ 2022-23ನೇ ಸಾಲಿನ ಪೂರಕ ಅಂದಾಜು-2 ರಡಿ ಹೆಚ್ಚುವರಿಯಾಗಿ ರೂ.200.00 ಕೋಟಿಗಳನ್ನು ಒದಗಿಸಿದೆ.</td></tr>
</table>

| | | |
|---|---|---|
| | | ಈ ಸಾಲಿನಲ್ಲಿ ಸರ್ಕಾರ ಮಂಜೂರು ಮಾಡಿರುವ ಅನುದಾನದಿಂದ ಗ್ರಾಮೀಣ ಭಾಗದ ಹಳ್ಳಿಗಳಿಗೆ ಪೂರ್ಣ ಪ್ರಮಾಣದಲ್ಲಿ ರಸ್ತೆ ಚರಂಡಿಗಳನ್ನು ಅಭಿವೃದ್ಧಿ ಮಾಡಲು ಅನುದಾನದ ಕೊರತೆಯಿದ್ದು, 2022-23ನೇ ಸಾಲಿನಲ್ಲಿ ರಸ್ತೆ, ಸೇತುವೆ & ಚರಂಡಿಗಳ ಅಭಿವೃದ್ಧಿಗಾಗಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ರೂ.1924.61 ಕೋಟಿಗಳ ಅನುದಾನ ಮಂಜೂರಾಗಿದ್ದು, ಒಟ್ಟು 6497 ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮತ್ತು 2022-23ನೇ ಸಾಲಿನ ಮಳೆ ಪರಿಹಾರ ಕಾರ್ಯಕ್ರಮದಡಿ ರಸ್ತೆ, ಸೇತುವೆ & ಚರಂಡಿ ಕಾಮಗಾರಿಗಳನ್ನು ಯಥಾಸ್ಥಿತಿಗೆ ತರಲು ರೂ.472.47 ಕೋಟಿಗಳನ್ನು ಮಂಜೂರು ಮಾಡಲಾಗಿದೆ.<br><br>ಉಳಿದಂತೆ ಮುಂದಿನ ದಿನಗಳಲ್ಲಿ ಬಾಕಿ ಉಳಿದಿರುವ ರಸ್ತೆ, ಸೇತುವೆ & ಚರಂಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಗ್ರಾಅಪ 1276/LAQ/ಬೆಳಗಾವಿ/2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ